## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್.ವಿ.ಸಂಕನೂರ ಇವರ ನಿಯಮ-330ಎ ರಡಿ ಪ್ರಸ್ತಾಪಿಸಿರುವ ಸೂಚನೆಗೆ ಹೇಳಿಕೆ

ವಿಷಯ :

ರಾಜ್ಯದ ಪ್ರಮುಖ ಪತ್ರಿಕೆಗಳಾದ ವಿಜಯವಾಣಿ, ವಿಜಯ ಕರ್ನಾಟಕ, ಕನ್ನಡ ಪ್ರಭ, ಪ್ರಜಾವಾಣಿ, ಸಂಯುಕ್ತ ಕರ್ನಾಟಕ ಮುಂತಾದ ದಿನ ಪತ್ರಿಕೆಗಳಲ್ಲಿ ವರದಿಯಾಗಿರುವಂತೆ- ಕಾರವಾರ ಜಿಲ್ಲೆಯ ನೂರಾರು ಶಾಲಾ ಕಾಲೇಜುಗಳ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಯವರು 2006ರ ನಂತರ ನೇಮಕಗೊಂಡ ಸಿಬ್ಬಂದಿಗೆ ಯಾವ ಪಿಂಚಣಿ ವ್ಯವಸ್ಥೆ ಇರುವುದಿಲ್ಲ. ಹಾಗಾಗಿ ನಿವೃತ್ತಿ ನಂತರದ ಜೀವನವನ್ನು ಸಾಗಿಸುವುದು ಬಹಳ ಕಷ್ಟಕರವಾಗಿರುತ್ತದೆ. ಆದ್ದರಿಂದ ಸರ್ಕಾರಿ ನೌಕರರಿಗೆ ನೀಡಿದಂತೆ ಎನ್.ಪಿ.ಎಸ್ ಪಿಂಚಣಿ ಯೋಜನೆಯನ್ನು ತಮಗೂ ನೀಡಬೇಕು ಎಂಬ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟುಕೊಂಡು ದಿನಾಂಕ:09/10/2019 ರಿಂದ ಕಾರವಾರ ಜಿಲ್ಲಾಧಿಕಾರಿಗಳ ಕಛೇರಿಯ ಎದುರು ಅನಿರ್ಧಿಷ್ಟವಾಧಿ ಹಾಗೂ ಅಹೋರಾತ್ರಿ ದರಣಿ ಹಮ್ಮಿಕೊಂಡಿರುವರು.

ಸಂಘದ ಇನ್ನುಳಿದ ಬೇಡಿಕೆಗಳಾದ ಕಾಲ್ಪನಿಕ ವೇತನಕ್ಕೆ ಸಂಬಂಧಿಸಿದಂತೆ, ಹಿರಿಯ ವಿಧಾನ ಪರಿಷತ್ತು ಸದಸ್ಯರಾದ ಹೊರಟ್ಟಿಯವರು ಸರ್ಕಾರಕ್ಕೆ ಸಲ್ಲಿಸಿದ ವರದಿಯನ್ನು ಜಾರಿಗೆ ಮಾಡಬೇಕು ಮತ್ತು ಶಿಕ್ಷಕರ ಕುಟುಂಬಕ್ಕೆ ಆರೋಗ್ಯ ವಿಮೆ ಜಾರಿಗೆ ನೀಡುವುದು, ಇದು ಅಲ್ಲದೇ ಅನೇಕ ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ 'ಡಿ' ದರ್ಜೆ ನೌಕರರನ್ನು ಖಾಯಂಗೊಳಿಸಿ ವೇತನ ಬಿಡುಗಡೆಗೊಳಿಸುವುದು ಹಾಗೂ ಪ್ರತಿ ವರ್ಗಕ್ಕೆ ಇರುವ ವಿದ್ಯಾರ್ಥಿ ಹಾಗೂ ಶಿಕ್ಷಕರ ಅನುಪಾತ ಕಡಿಮೆ ಮಾಡಬೇಕು ಎಂದು ಮಾನ್ಯ ಮುಖ್ಯಮಂತ್ರಿಗಳು ಹಾಗೂ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರನ್ನು ಆಗ್ರಹಿಸಿದ್ದಾರೆ.

ಎನ್.ಪಿ.ಎಸ್ ಪಿಂಚಣಿ ಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದ ಗಮನಕ್ಕೆ ನಾನು ತರಬಯಸುವುದೇನೆಂದರೆ ಈಗಾಗಲೇ ಮಹಾರಾಷ್ಟ್ರ, ಕೇರಳ, ಒರಿಸ್ಸಾ, ಆಂಧ್ರಪ್ರದೇಶ ಹಾಗೂ ತಮಿಳುನಾಡು ಸರ್ಕಾರಗಳು ಅನುದಾನಿತ ಸಿಬ್ಬಂದಿಗಳ ಪಿಂಚಣಿ ವಂತಿಕೆಯನ್ನು ಸರ್ಕಾರವೇ ಬರಿಸುವುದರ ಮೂಲಕ ಎನ್.ಪಿ.ಎಸ್ ಯೋಜನೆಯನ್ನು ಜಾರಿ ಮಾಡಿರುತ್ತಾರೆ. ಆದ್ದರಿಂದ ಕರ್ನಾಟಕ ಸರ್ಕಾರವು ಕೂಡ ಬೇರೆ ರಾಜ್ಯಗಳಂತೆ ಎನ್.ಪಿ.ಎಸ್ ಪಿಂಚಣಿ ಯೋಜನೆ ಜಾರಿಗೆ ತರಲು ಒತ್ತಾಯಿಸುವೆನು. ಅದರಂತೆ ಕಾಲ್ಪನಿಕ ವೇತನ ಸಮಸ್ಯೆ ಹಾಗೂ ಸಂಘದವರ ಇನ್ನಿತರ ಬೇಡಿಕೆಗಳನ್ನು ಈಡೇರಿಸುವ ಕುರಿತು.

## ಹೇಳಿಕೆ

### ನೂತನ ಪಿಂಚಣಿ ಯೋಜನೆ (NPS) ಕುರಿತು:-

2006ರ ಪಿಂಚಣಿ ನೀತಿಯಲ್ಲಿ ಸರ್ಕಾರದ ಅನುದಾನಿತ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ: FD (SPL) 04 PET 2005, ದಿನಾಂಕ: 31.03.2006ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

**...(8) The Defined Benefit Pension to the employees of Grant-in-Aid educational institutions shall be discontinued to the recruits joining on or after 01.04.2006. The New Contributory Pension Scheme shall be applicable to them on optional basis to the employee & the employer and the option shall be exercised by both. However, the employer's contribution shall be met by the respective institutions and not by the State Government.**

- ಈ ಆದೇಶವು ದಿನಾಂಕ: 01.04.2006ರಿಂದ ಜಾರಿಗೆ ಬಂದಿರುತ್ತದೆ.
- ದಿನಾಂಕ:01.04.2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲಾ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೂ ಸಹ ಈ ಮೇಲಿನ ನಿಯಮ ಅನ್ವಯವಾಗುತ್ತದೆ.

. . 2

ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಚಾ (Optional) ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಕಾಲ್ಪನಿಕ ವೇತನ ಕುರಿತು:-

ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಯ ಸಿಬ್ಬಂದಿಗಳ ಅನುದಾನರಹಿತ ಸೇವಾವಧಿಯನ್ನು ಯಾವುದೇ ಸೇವಾ/ಪಿಂಚಣಿ ಸೌಲಭ್ಯಗಳಿಗೆ ಪರಿಗಣಿಸದಿರಲು ಕರ್ನಾಟಕ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು (ವೇತನ, ಪಿಂಚಣಿ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ದಿನಾಂಕ: 01.06.1995 ರಿಂದ ಅನ್ವಯವಾಗುವಂತೆ ಜಾರಿಗೆ ತರಲಾಗಿರುತ್ತದೆ. ಈ ಅಧಿನಿಯಮವನ್ನು ಪ್ರಶ್ನಿಸಿ ರಿಟ್ ಅರ್ಜಿ ಸಂಖ್ಯೆ: 21216/2014 ಮತ್ತು ತತ್ಸಂಬಂಧದ ಅರ್ಜಿಗಳು ದಾಖಲಾಗಿದ್ದು, ಈ ಅರ್ಜಿಗಳನ್ನು ಪರಿಶೀಲಿಸಿದ ನ್ಯಾಯಾಲಯವು ದಿನಾಂಕ: 10.07.2015ರಂದು ನೀಡಿರುವ ತೀರ್ಪಿನಲ್ಲಿ ಪ್ರಸ್ತಾಪಿತ 2014ರ ಅಧಿನಿಯಮವನ್ನು "Struck Down" ಗೊಳಿಸಲಾಗಿರುತ್ತದೆ.

ಮಾನ್ಯ ಉಚ್ಚನ್ಯಾಯಾಲಯದ ದಿನಾಂಕ: 10.07.2015ರ ಆದೇಶವನ್ನು ಪ್ರಶ್ನಿಸಿ, ರಾಜ್ಯ ಸರ್ಕಾರವು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ 2476/2015 ಮತ್ತು 2467/2015ನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:10.07.2015ರ ಅಂತಿಮ ಆದೇಶಕ್ಕೆ ದಿನಾಂಕ: 27.11.2015ರಂದು ಯಥಾಸ್ಥಿತಿ ಕಾಪಾಡಲು ಆದೇಶಿಸಿರುತ್ತದೆ.

ಪ್ರಕರಣವು ಮಾನ್ಯ ಉಚ್ಚನ್ಯಾಯಾಲಯದಲ್ಲಿ ಬಾಕಿ ಇರುವುದರಿಂದ ಪ್ರಸ್ತುತ 2014ರ ಅಧಿನಿಯಮವು ಚಾಲ್ತಿಯಲ್ಲಿರುತ್ತದೆ. ಆದುದರಿಂದ, ಅನುದಾನರಹಿತ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಗಳಿಗೆ ಪರಿಗಣಿಸಲು ಅವಕಾಶವಿಲ್ಲ.

ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ಬಡ್ತಿ ವಿಚಾರದಲ್ಲಿ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿರವರ ಅಧ್ಯಕ್ಷತೆಯಲ್ಲಿ ರಚಿಸಲ್ಪಟ್ಟ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ.

ವಿಮಾ ಸೌಲಭ್ಯ :-

ರಾಜ್ಯದ ಅನುದಾನಿತ ಮತ್ತು ಅನುದಾನರಹಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳನ್ನು ವೈದ್ಯಕೀಯ ವಿಮಾ ಸೌಲಭ್ಯವಡಿ ತರುವ ಕುರಿತು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಲಾಗಿ, ಶಿಕ್ಷಣ ಇಲಾಖೆಯ ಮಹತ್ವದ ಕಾರ್ಯಕ್ರಮಗಳಾದ ಸುಸಜ್ಜಿತ ಕಟ್ಟಡ ನಿರ್ಮಾಣ, ಶೌಚಾಲಯ ನಿರ್ಮಾಣ, ಕುಡಿಯುವ ನೀರಿನ ವ್ಯವಸ್ಥೆ, ಪೀಠೋಪಕರಣ, ಕಲಿಕೆ ಉಪಕರಣಗಳು ಇತ್ಯಾದಿ ಸೌಲಭ್ಯಗಳನ್ನು ಒದಗಿಸಲು ಸಾಕಷ್ಟು ಸಂಪನ್ಮೂಲದ ಅಗತ್ಯವಿರುವುದರಿಂದ, ಈ ಹೊಸ ಕಾರ್ಯಕ್ರಮಕ್ಕೆ ಅನುದಾನ ಒದಗಿಸುವುದು ಕಷ್ಟವಾಗುವುದೆಂದು, ಈಗಿನ ಪರಿಸ್ಥಿತಿಯಲ್ಲಿ ಹೊಸ ಯೋಜನೆ ಪರಿಗಣಿಸಲು ಸಾಧ್ಯವಾಗದು. ಅಲ್ಲದೆ, ಈ ಯೋಜನೆ ಜಾರಿಗೆ ತಂದರೆ ಶಿಕ್ಷಣ ಇಲಾಖೆಗೂ ಇನ್ನೂ ಹೆಚ್ಚಿನ ಕಾರ್ಯನಿರ್ವಹಣೆಯಾಗುವುದಲ್ಲದೆ ಈ ವ್ಯವಸ್ಥೆ ನೋಡಿಕೊಳ್ಳಲು ಹೆಚ್ಚಿನ ಸಿಬ್ಬಂದಿ ಸಹ ಬೇಕಾಗಬಹುದು. ಆದ್ದರಿಂದ ಸಧ್ಯದ ಪರಿಸ್ಥಿತಿಯಲ್ಲಿ ಈ ಯೋಜನೆಯನ್ನು ಪರಿಗಣಿಸಲು ಸಾಧ್ಯವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳಿಗೆ ವೈದ್ಯಕೀಯ ವಿಮಾ ಸೌಲಭ್ಯ ಜಾರಿಗೊಳಿಸಲು ಸಾಧ್ಯವಿಲ್ಲ.

'ಡಿ' ದರ್ಜೆ ನೌಕರರನ್ನು ಖಾಯಂಗೊಳಿಸಿ ವೇತನ ಬಿಡುಗಡೆಗೊಳಿಸುವ ಕುರಿತು:-

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 02.02.2000ರ ಪೂರ್ವದಲ್ಲಿ ನೇಮಕಾತಿ ಮಾಡಿಕೊಂಡಿರುವ ತಲಾ ಒಂದು ಗ್ರೂಪ್-ಡಿ ಮತ್ತು ಗ್ರೂಪ್-ಸಿ ಹುದ್ದೆಗಳನ್ನು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕಾತಿ ಮಾಡಿಕೊಂಡಿರುವ ಗ್ರೂಪ್-ಡಿ ಮತ್ತು ಗ್ರೂಪ್-ಸಿ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಅನುಮೋದನೆಯೊಂದಿಗೆ ಅನುದಾನಕ್ಕೆ ಒಳಪಡಿಸಲು ಅನುಮೋದನೆ ನೀಡಲಾಗುತ್ತಿತ್ತು. ಸರ್ಕಾರಿ ಆದೇಶ ಸಂಖ್ಯೆ: ಇಡಿ 52 ವಿವಿಧ 99 02.02.2000ರ ಮೂಲಕ ಪ್ರೌಢಶಾಲೆಗಳ ಮಾದರಿ ಸಿಬ್ಬಂದಿ ರಚನೆಗೆ ತಿದ್ದುಪಡಿ ತರಲಾಗಿದ್ದು,

..3

ಇದರಲ್ಲಿ ಗ್ರೂಪ್ 'ಡಿ' ಹುದ್ದೆಯನ್ನು ಕೈಬಿಡಲಾಗಿದೆ. ಆದ್ದರಿಂದ, ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಗ್ರೂಪ್ 'ಡಿ' ಹುದ್ದೆಯನ್ನು ಅನುದಾನಕ್ಕೆ ಒಳಪಡಿಸಲು ಅವಕಾಶವಿರುವುದಿಲ್ಲ.

ಈ ಮಧ್ಯೆ ಖಾಸಗಿ ಅನುದಾನಿತ ಪ್ರೌಢಶಾಲೆಗಳಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ **Karnataka Educational Institutioins (Recruitment and Terms and conditions of employees in private aided primary and secondary educational institutions) Rules 1999** ಗೆ ದಿನಾಂಕ:07.08.2017ರ ಅಧಿಸೂಚನೆಯ ಮೂಲಕ ತಿದ್ದುಪಡಿ ತರಲಾಗಿದ್ದು, ಅದರಂತೆ, ಖಾಸಗಿ ಅನುದಾನಿತ ಶಾಲೆಯ ಗ್ರೂಪ್-ಡಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.

## ವಿದ್ಯಾರ್ಥಿ ಹಾಗೂ ಶಿಕ್ಷಕರ ಅನುಪಾತ ಕಡಿಮೆ ಮಾಡುವ ಕುರಿತು:-

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿನ ಪ್ರಸ್ತುತದಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತವು 70:1 ಇದ್ದು ಇದನ್ನು ಕಡಿಮೆ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

(ಎಸ್.ಸುರೇಶಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ,
ಕಾರ್ಮಿಕ ಸಚಿವರು.

ಸಂಖ್ಯೆ : ಇಪಿ 180 ಎಸ್ಇಎಸ್ 2019